Sl. No.	Year	Name of the circle	No. of Cases Auctioned	Revenue realized by the Govt. (in Rs.)
1		Bangalore	-	-
2		Belgaum	-	-
3		Bellary	-	-
4		Chamarajanagar	No	-
5		Chickmagalur	16	7,41,430
6		Dharwad	29	14,31,012
7		Gulbarga	-	-
8		Hassan	8	3,23,100
9		Kanara	11	2,40,637
10		Kodagu	8	3,35,500
11		Mangalore	26	11,01,594
12		Mysore	47	15,45,824
13		Shimoga	51	13,15,500
		Total	**196**	**70,34,597**

ಕಾಮಗಾರಿಗೆ ನೀಡಿದ ಮಂಜೂರಾತಿ ವಿವರ

55 (5) ಶ್ರೀ ವಸಂತ ಬಂಗೇರ (ಬೆಳ್ತಂಗಡಿ):– ಮಾನ್ಯ ಜಲಸಂಪನ್ಮೂಲ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) 2010–11 ಮತ್ತು 2011–12ರ ಸಾಲಿನಲ್ಲಿ RIDF-XVI ಅಡಿ (Rural Infrastructure Development Fund) ಎಷ್ಟು ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದೆ.

ಆ) ಎಷ್ಟು ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ;

ಇ) ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು)?

ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲಗಳ ಸಚಿವರು):–

ಅ) 2010–11ನೇ ಸಾಲಿನಲ್ಲಿ RIDF-XVI ಅಡಿ (Rural Infrastructure Development Fund) ಜೌಗು, ಸವಳು ಹಾಗೂ ಜವಳು ಭೂಮಿ ಸುದಾರಣೆಯ ರೂ. 80.00 ಕೋಟಿ ಮೊತ್ತದ 30 ಕಾಮಗಾರಿಗಳಿಗೆ ಮಂಜೂರಾತಿ ಪಡೆಯಲಾಗಿದೆ.

2010–11ನೇ ಸಾಲಿನಲ್ಲಿ RIDF-XVI ಅಡಿ (Rural Infrastructure Development Fund) ಕಾಮಗಾರಿಗಳ ಮಂಜೂರಾತಿ ಪ್ರಕ್ರಿಯೆ ಪರಿಶೀಲನೆಯಲ್ಲಿದೆ.

ಆ) ಇದುವರೆಗೂ, ಮೇಲ್ಕಂಡ ಕಾಮಗಾರಿಗಳ ಪೈಕಿ 27 ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಇ) ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ

ಸರ್ಕಾರಿ ಕಛೇರಿಗಳಲ್ಲಿ ಕನ್ನಡ

58 (262) ಶ್ರೀ ಎಸ್. ಆರ್. ವಿಶ್ವನಾಥ್ (ಯಲಹಂಕ):– ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸರ್ಕಾರದ ಇಲಾಖೆಗಳಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಳಸಲು ಆದೇಶವಿದ್ದರೂ ಸಹ ಕೆಲವು ಇಲಾಖೆಗಳಲ್ಲಿ ಕನ್ನಡವನ್ನು ಬಳಸದೆ ಆಂಗ್ಲ ಭಾಷೆಯನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸಂಪೂರ್ಣವಾಗಿ ಕನ್ನಡವನ್ನು ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಬಳಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು):–

ಅ) ಪ್ರಸ್ತುತ ಲಭ್ಯವಿರುವ ಮಾಹಿತಿ ಪ್ರಕಾರ ಸರ್ಕಾರದ ಆದೇಶ ಮತ್ತು ಸುತ್ತೋಲೆಗಳಿಗೆ ಅನುಗುಣವಾಗಿ ಸರ್ಕಾರದ ಎಲ್ಲಾ ಇಲಾಖೆಗಳ ಆಡಳಿತದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸಲಾಗುತ್ತಿದೆ.